ಲ-330(21)

ಮಾನ್ಯ ವಿಧಾನ ಪರಿಷತ್ತ್ ಸದಸ್ಯರಾದ ಶ್ರೀ ಕೆ.ಟಿ.ಶ್ರೀಕಂಠೇಗೌಡ, ಬಸವರಾಜ ಶಿವಲಿಂಗಪ್ಪ ಹೊರಟ್ಟಿ, ಡಾ:ವೈ.ಎ.ನಾರಾಯಣಸ್ವಾಮಿ, ಆಯನೂರು ಮಂಜುನಾಥ, ಶರಣಪ್ಪ ಮಟ್ಟೂರು, ಡಾ:ಚಂದ್ರಶೇಖರ ಬಿ.ಪಾಟೀಲ್ ಇವರು ಮಂಡಿಸಿರುವ ನಿಯಮ–330ಕ್ಕೆ ಉತ್ತರ ಒದಗಿಸುವ ಬಗ್ಗೆ.

<u>ವಿಷಯ:–</u>

ವೃತ್ತಿ ಶಿಕ್ಷಣ ಇಲಾಖೆಯಲ್ಲಿ ಸೇವೆ ಸಲ್ಲಿಸಿದ ಶಿಕ್ಷಕರನ್ನು ಇತರೆ ಇಲಾಖೆಗಳಲ್ಲಿ ವಿಲೀನಗೊಳಿಸಲಾಗಿದ್ದು ಅವರ ಖಾಯಂ ಪೂರ್ವ ಸೇವಾ ಅವಧಿಯನ್ನು ಪರಿಗಣಿಸಿ ನಿಶ್ಚಿತ ಪಿಂಚಣಿ ನೀಡುವ ಸಂಬಂಧ ವಿಧೇಯಕಕ್ಕೆ ತಿದ್ದುಪಡಿ ತರುವ ಬಗ್ಗೆ ಪ್ರಸ್ತಾಪಿಸುವುದು.

<u>ಉತ್ತರ:–</u>

ವೃತ್ತಿ ಶಿಕ್ಷಣ ಇಲಾಖೆಯಲ್ಲಿ ವೃತ್ತಿ ಆಧಾರಿತ ಕೋರ್ಸುಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅರೆಕಾಲಿಕ ವೃತ್ತಿ ಆಧಾರಿತ ಕೋರ್ಸುಗಳ ನೌಕರರನ್ನು ವಿಲೀನಗೊಳಿಸಲು ಕರ್ನಾಟಕ ರಾಜ್ಯ ಪತ್ರ ಸಂಖ್ಯೆ:ಸಂವ್ಯಶಾಇ 22:ಶಾಸನ 2011 ಬೆಂಗಳೂರು ದಿನಾಂಕ:06.04.2011ರ ವಿಧೇಯದಲ್ಲಿ ವಿಧಿಸಿರುವ ಷರತ್ತುಗಳ ಆಧಾರದ ಮೇಲೆ ವೃತ್ತಿ ಶಿಕ್ಷಣ ಇಲಾಖೆಯಲ್ಲಿ ಉಪನ್ಯಾಸಕರಾಗಿ ಕರ್ತವ್ಯ ನಿರ್ವಹಿಸುತ್ತಿದ್ದ ಉಪನ್ಯಾಸಕರನ್ನು ವಿಲೀನ ವಿಧೇಯಕದನ್ವಯ ದಿನಾಂಕ:06/04/2011ಕ್ಕೆ ನಿರಂತರವಾಗಿ 5 ವರ್ಷಗಳ ಸೇವೆ ಸಲ್ಲಿಸಿರುವವರನ್ನು ವಿವಿಧ ಇಲಾಖೆಗಳಲ್ಲಿ ವಿಲೀನಗೊಳಿಸಲಾಗಿದೆ ವಿಲೀನಗೊಂಡ ಅರೆಕಾಲಿಕ ವೃತ್ತಿ ಆಧಾರಿತ ಕೋರ್ಸುಗಳ ನೌಕರರನ್ನು ಕರ್ತವ್ಯ ಹಾಜರಾದ ನಂತರ ಈ ಅಧಿನಿಯಮದ ಅಡಿಯಲ್ಲಿ ಆತನ ಪ್ರಾರಂಭಿಕ ಮೂಲ ವೇತನವನ್ನು, ಆತನು ವಿಲೀನಗೊಂಡ ಹುದ್ದೆಯ ಪ್ರವರ್ಗದ ಕಾಲಿಕ ವೇತನ ಶ್ರೇಣಿಯ ಕನಿಷ್ಟಕ್ಕೆ ನಿಗಧಿಗೊಳಿಸತಕ್ಕದ್ದು ಹಾಗೂ ತನ್ನ ವಿಲೀನಕ್ಕೆ ಮೊದಲು ಸಲ್ಲಿಸಿದ ಸೇವೆಯನ್ನು ವೇತನ ಜೇಷ್ಟತೆ ಹಾಗೂ ರಜೆ ಅಥವಾ ಪಿಂಚಣಿಗೆ ಸಂಬಂಧಿಸಿದಂತೆ ಲೆಕ್ಕಕ್ಕೆ ತೆಗದು ಕೊಳ್ಳತಕ್ಕದಲ್ಲ ಎಂದು ಅಧಿಸೂಚನೆಯಲ್ಲಿ ತಿಳಿಸಲಾಗಿದೆ. ಆದ್ದರಿಂದ ಸದರಿ ನೌಕರರ ಖಾಯಂ ಪೂರ್ವ ಸೇವೆಯನ್ನು ಪರಿಗಣಿಸಲು ಹಾಗೂ ವಿಲೀನ ವಿಧೇಯ ತಿದ್ದುಪಡಿ ಮಾಡಲು ನಿಯಮಗಳಲ್ಲಿ ಆಸ್ಪದವಿರುವುದಿಲ್ಲ.

ಸಂಖ್ಯೆ: ಇಡಿ 12 ಟಿವಿಇ 2020

(ಎಸ್.ಸುರೇಶ್ ಕುಮಾರ್)
**ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು**